# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103

ದೂರವಾಣಿ: 0816-2254546, 0816-2255596, 0816-2255597 ಫ್ಯಾಕ್ಸ್ :0816-2270719


ಸಂಖ್ಯೆ: ತುವಿ:ತಾವಿ-71177:2024-25/231 ದಿನಾಂಕ:31.01.2025

## -: ಸುತ್ತೋಲೆ :-

ವಿಷಯ: ವಿಶ್ವವಿದ್ಯಾನಿಲಯದಲ್ಲಿ ಆಯೋಜಿಸುವ ವಿವಿಧ ಕಾರ್ಯಾಗಾರ, ವಿಚಾರ ಸಮ್ಮೇಳನ ಹಾಗೂ ಇತರೆ ಕಾರ್ಯಕ್ರಮಗಳಲ್ಲಿ ಊಟದ ವ್ಯವಸ್ಥೆಯನ್ನು ಕಲ್ಪಿಸುತ್ತಿರುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:21.01.2025

* * *

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ ಆವರಣದ ಸರ್.ಎಂ. ವಿಶ್ವೇಶ್ವರಯ್ಯ ಸಭಾಂಗಣ, ಡಾ. ಸದಾನಂದ ಮಯ್ಯ ಕಟ್ಟಡದ ಸಭಾಂಗಣ ಮತ್ತು ವಿ.ವಿ ಆವರಣದಲ್ಲಿ ಘಟಕ ಕಾಲೇಜುಗಳು, ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ವಿವಿಧ ಕೋಶ ಮತ್ತು ವಿವಿಧ ಪೀಠಗಳ ವತಿಯಿಂದ ವಿವಿಧ ಕಾರ್ಯಾಗಾರ, ವಿಚಾರ ಸಮ್ಮೇಳನ, ವಾರ್ಷಿಕೋತ್ಸವ ಇತ್ಯಾದಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿದಾಗ ಲಘು ಉಪಾಹಾರ/ಊಟದ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದೆ, ಸದರಿ ಕಾರ್ಯಕ್ರಮವು ಮುಗಿದ ಬಳಿಕ ಉಪಹಾರ/ಊಟ ಮಾಡಿದ ತಟ್ಟೆ/ಲೋಟ/ಬಾಳೆ ಎಲೆ ಮತ್ತು ಉಳಿಕೆ ಊಟದ ಪದಾರ್ಥಗಳನ್ನು (ಪಾಯಸ, ಅನ್ನ, ಸಾರು, ರೈಸ್‌ಬಾತ್, ಉಳಿಕೆ ಊಟದ ಐಟಂಗಳು) ವಿಶ್ವವಿದ್ಯಾನಿಲಯದ ಆವರಣದಲ್ಲೇ ಎಸೆದು/ಸುರಿದು ಹೋಗುತ್ತಿರುವುದರಿಂದ ಸ್ವಚ್ಚತೆಯ ಸಮಸ್ಯೆ ಉಂಟಾಗುತ್ತಿದ್ದು, ಊಟದ ಪದಾರ್ಥಗಳ ವಾಸನೆಯನ್ನು ಹಿಡಿದು ಕ್ಯಾಂಪಸ್‌ಗೆ ನಾಯಿಗಳು ಅಕ್ರಮ ಪ್ರವೇಶ ಮಾಡಿ ಊಟದ ಪದಾರ್ಥಗಳನ್ನು ತಿಂದು ಗಲೀಜು ಮಾಡುತ್ತಿವೆ, ಅಲ್ಲದೇ ಊಟದ ಪದಾರ್ಥವು ಅಲ್ಲೇ ಕೊಳೆತು ಗಬ್ಬು ವಾಸನೆ ಬರುತ್ತಿದೆ.

ಆದ್ದರಿಂದ, ಇನ್ನುಮುಂದೆ ವಿಶ್ವವಿದ್ಯಾನಿಲಯದ ಆವರಣದಲ್ಲಿ ಆಯೋಜಿಸುವ ಯಾವುದೇ ಕಾರ್ಯಕ್ರಮಗಳಿಗೆ ಲಘು ಉಪಾಹಾರ/ಊಟದ ವ್ಯವಸ್ಥೆಯನ್ನು ಕಲ್ಪಿಸಿದ ತರುವಾಯ ಉಳಿಕೆ ಊಟದ ಪದಾರ್ಥಗಳನ್ನು ಮತ್ತು ತಟ್ಟೆ/ಲೋಟ/ಊಟದ ಬಾಳೆ ಎಲೆಗಳನ್ನು ಊಟದ ವ್ಯವಸ್ಥೆ ಕಲ್ಪಿಸಿರುವ ಏಜೆನ್ಸಿ/ಕೇಟರಿಂಗ್ ಸಂಸ್ಥೆಯವರೇ ಅದನ್ನು ವಾಪಸ್ಸು ತೆಗೆದುಕೊಂಡು ಹೋಗುವಂತೆ ಯಾವುದೇ ಕಾರಣಕ್ಕೂ ವಿಶ್ವವಿದ್ಯಾನಿಲಯದ ಆವರಣದಲ್ಲಿ ಸುರಿಯದಂತೆ ನೋಡಿಕೊಳ್ಳಬೇಕೆಂದು ಕಾರ್ಯಕ್ರಮದ ಆಯೋಜರುಗಳಿಗೆ ಈ ಮೂಲಕ ಸೂಚಿಸಲಾಗಿದೆ, ತಪ್ಪಿದಲ್ಲಿ ಸಂಬಂಧಿಸಿದ ಕಾರ್ಯಕ್ರಮದ ಆಯೋಜಕರೇ ನೇರ ಜವಾಬ್ದಾರರಾಗಿರುತ್ತಾರೆಂದು ಈ ಮೂಲಕ ಸೂಚಿಸಲಾಗಿದೆ.

"ಕರಡು ಕುಲಸಚಿವರಿಂದ ಅನುಮೋದನೆಗೊಂಡಿದೆ"

ಉಪ ಕುಲಸಚಿವರು

ಉಪಕುಲಸಚಿವರು
ಸಾಮಾನ್ಯ ವಿಭಾಗ
ತುಮಕೂರು ವಿಶ್ವವಿದ್ಯಾಲಯ
ತುಮಕೂರು

ಗೆ,

1. ಮಾನ್ಯ ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಮತ್ತು ಕಲಾ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
5. ಉಪಕುಲಸಚಿವರು, ಸಾಮಾನ್ಯ ಮತ್ತು ಅಭಿವೃದ್ಧಿ ವಿಭಾಗ/ಸಿಬ್ಬಂದಿ ವಿಭಾಗ/ಶೈಕ್ಷಣಿಕ ವಿಭಾಗ/ಸಿಂಡಿಕೇಟ್ ವಿಭಾಗ/ ಕಾನೂನು ಕೋಶ/ಖರೀದಿ ಕೋಶ ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ನಿರ್ದೇಶಕರು, ಸಂಶೋಧನೆ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು

9. ನಿರ್ದೇಶಕರು, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
10. ಎಲ್ಲಾ ನಿಲಯಪಾಲಕರುಗಳು, ವಿಶ್ವವಿದ್ಯಾನಿಲಯ ವಿದ್ಯಾರ್ಥಿನಿಲಯಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
11. ಮೇಲ್ವಿಚಾರಕರು, ಅತಿಥಿ ಗೃಹ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
12. ಕಾರ್ಯಕ್ರಮ ಸಂಯೋಜನಾಧಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನೆ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
13. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ಈ ಸುತ್ತೋಲೆಯನ್ನು ಎಲ್ಲಾ ಸಿಬ್ಬಂದಿಗಳಿಗೆ ಇ–ಮೇಲ್ ಮಾಡುವುದು.
14. ಗ್ರಂಥಪಾಲಕರು, ವಿ.ವಿ. ಗ್ರಂಥಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
15. ಎಸ್ಟೇಟ್ ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
16. ನಿರ್ದೇಶಕರು, ಡಾ. ಬಿ.ಆರ್ ಅಂಬೇಡ್ಕರ್ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
17. ನಿರ್ದೇಶಕರು, ಐ.ಕ್ಯೂ.ಎ.ಸಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
18. ಸಂಯೋಜಕರು, ಎಸ್.ಸಿ.ಪಿ/ಟಿ.ಎಸ್.ಪಿ ಘಟಕ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
19. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
20. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
21. ಕಚೇರಿ ಪ್ರತಿ.